ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ಫ್ಯಾಕ್ಸ್: 080-22863576 / 22861665
Email: dmabir@gmail.com
Website: www.municipaladmn.gov.in

9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ: 88/ಡಿಎಂಎ/15/ಎಸ್‌ಡಬ್ಲ್ಯುಎಂ/2013-14 ದಿನಾಂಕ: 8-01-2021

: ಸುತ್ತೋಲೆ :

ವಿಷಯ: ಸ್ವಚ್ಛತಾ ಕೆಲಸಗಾರರು, ಪೌರಕಾರ್ಮಿಕರು, ಸಫಾಯಿ ಕರ್ಮಚಾರಿಗಳು ಸುರಕ್ಷತಾ ಪರಿಕರಗಳಿಲ್ಲದೆ ಕೆಲಸ ನಿರ್ವಹಿಸುತ್ತಿದ್ದಲ್ಲಿ ಸಂಬಂಧಪಟ್ಟ ಹೊರಗುತ್ತಿಗೆ ಏಜೆನ್ಸಿಗಳಿಗೆ ದಂಡ ವಿಧಿಸುವ ಕುರಿತು.

ಉಲ್ಲೇಖ:
1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿ ದಿನಾಂಕ: 23.02.2018
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ನಗರಾಭಿವೃದ್ದಿ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿ. ದಿನಾಂಕ: 15.12.2020

******

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದೈನಂದಿನ ಸ್ವಚ್ಛತಾ ಕೆಲಸಗಳನ್ನು ನಿರ್ವಹಿಸುವ ವೇಳೆ ಸ್ಥಳೀಯ ಸ್ವಚ್ಛತಾ ಸಿಬ್ಬಂಧಿಯಾಗಲಿ ಅಥವಾ ಹೊರಗುತ್ತಿಗೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಕೆಲಸಗಾರರು, ಸಫಾಯಿ ಕರ್ಮಚಾರಿಗಳು ಅಗತ್ಯ ಸುರಕ್ಷತಾ ಪರಿಕರಗಳಾದ ಹ್ಯಾಂಡ್ ಗ್ಲೌಸ್, ಗಮ್‌ಬೂಟ್ಸ್, ಹೆಲ್ಮೆಟ್, ಗಾಗಲ್ಸ್, ಮಾಸ್ಕ್, ಸ್ಯಾನಿಟೈಸರ್ ಇತ್ಯಾದಿಗಳನ್ನು ಕಡ್ಡಾಯವಾಗಿ ಉಪಯೋಗಿಸಬೇಕಿರುತ್ತದೆ. ಈ ನಿಟ್ಟಿನಲ್ಲಿ ಖಾಯಂ ರೀತ್ಯಾ ನಿರ್ವಹಿಸತ್ತಿರುವ ಸ್ವಚ್ಛತಾ ಸಿಬ್ಬಂದಿಗಳಿಗೆ ಸ್ಥಳೀಯ ಸಂಸ್ಥೆಗಳ ವತಿಯಿಂದ ಹಾಗೂ ಹೊರಗುತ್ತಿಗೆ ಮೇಲಿರುವವರಿಗೆ ಸಂಬಂಧಪಟ್ಟ ಗುತ್ತಿಗೆದಾರರಿಂದ ಸುರಕ್ಷತಾ ಪರಿಕರಗಳನ್ನು ನೀಡುವುದು ಆದ್ಯತೆಯ ವಿಷಯವಾಗಿರುತ್ತದೆ. ಆದರೆ, ಸ್ವಚ್ಛತಾ ಸಿಬ್ಬಂದಿಗಳಿಗೆ ಅಗತ್ಯವಿರುವ ಸುರಕ್ಷತಾ ಪರಿಕರಗಳನ್ನು ನೀಡದೇ ಇರುವುದು ಈ ನಿರ್ದೇಶನಾಲಯದ ಗಮನಕ್ಕೆ ಬಂದಿರುತ್ತದೆ.

ನಗರ ಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛತಾ ಸಿಬ್ಬಂದಿಗಳು ಸುರಕ್ಷತಾ ಪರಿಕರಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಕಂಡು ಬಂದಲ್ಲಿ ಅಂತಹ ಸ್ವಚ್ಛತಾ ಸಿಬ್ಬಂದಿಗಳು ಹೊರಗುತ್ತಿಗೆಯ ಕೆಲಸಗಾರರಾಗಿದ್ದಲ್ಲಿ ಸಂಬಂಧಪಟ್ಟ ಗುತ್ತಿಗೆದಾರರುಗಳಿಗೆ ದಂಡವನ್ನು ವಿಧಿಸಲು ಉಲ್ಲೇಖ (1)ರ ಮತ್ತು (2)ರ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿರುತ್ತದೆ. ಸದರಿ ಸಭೆಯ ನಿರ್ದೇಶನದನ್ವಯ ಕೆಳಕಂಡಂತೆ ದಂಡ ವಿಧಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

- ಮೊದಲ ಬಾರಿಯ ವೈಫಲ್ಯಕ್ಕೆ ಗುತ್ತಿಗೆದಾರರಿಗೆ ವಿಧಿಸುವ ದಂಡದ ಮೊತ್ತ – ರೂ. 10,000/-
- ಎರಡನೇ ಹಾಗೂ ನಂತರದ ಪ್ರಕರಣಗಳಲ್ಲಿ ಗುತ್ತಿಗೆದಾರರಿಗೆ ವಿಧಿಸುವ ದಂಡದ ಮೊತ್ತ –ರೂ 20,000/-

ಖಾಯಂ / ನೇರಪಾವತಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ಸಿಬ್ಬಂದಿಗಳಿಗೆ ಅಗತ್ಯ ಸುರಕ್ಷತಾ ಪರಿಕರಗಳನ್ನು ಒದಗಿಸದೆ ಇರುವ ಸಂದರ್ಭಗಳಲ್ಲಿ ಅಂತಹ ಸಿಬ್ಬಂದಿಗಳ ಮೇಲುಸ್ತುವಾರಿ ವಹಿಸಿರುವಂತಹ ಆರೋಗ್ಯ ನಿರೀಕ್ಷಕರುಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳತಕ್ಕದ್ದು.

ಮೇಲ್ಕಂಡಂತೆ, ದಂಡದ / ಶಿಸ್ತಿನ ಪ್ರಮಾಣವನ್ನು ನಿಮ್ಮ ಜಿಲ್ಲೆಯ ಎಲ್ಲಾ ಮಹಾನಗರಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜಾರಿಗೊಳಿಸಲು ಹಾಗೂ ನಗರ ಸ್ಥಳಿಯ ಸಂಸ್ಥೆಯಲ್ಲಿ ಹೊರಗುತ್ತಿಗೆ ಟೆಂಡರ್ ದಾಸ್ತಾವೇಜಿನಲ್ಲಿ ಸದರಿ ಷರತ್ತುಗಳನ್ನು ವಿಧಿಸಲು ಅಗತ್ಯ ಕ್ರಮ ಕೈಗೊಳ್ಳುವುದು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಟೆಂಡರ್ ಮೂಲಕ ಸ್ವಚ್ಛತಾ ಕಾರ್ಯವನ್ನು ನಿರ್ವಹಿಸುತ್ತಿದ್ದಲ್ಲಿ ಅಂತಹ ಗುತ್ತಿಗೆದಾರರಿಗೆ ಲಿಖಿತ ರೂಪದಲ್ಲಿ ಈ ಬಗ್ಗೆ ತಿಳುವಳಿಕೆ ಪತ್ರವನ್ನು ನೀಡಬೇಕು. ಈ ನಿಟ್ಟಿನಲ್ಲಿ ಯಾವುದೇ ನಿರ್ಲಕ್ಷ್ಯ ಹಾಗೂ ಬೇ-ಜವಾಬ್ದಾರಿಗೆ ನಗರ ಸ್ಥಳಿಯ ಸಂಸ್ಥೆಯ ಮುಖ್ಯಸ್ಥರನ್ನು ಹೊಣೆಗಾರರನ್ನಾಗಿ ಮಾಡುವುದು.

ನಿರ್ದೇಶಕರು
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು

ಇವರಿಗೆ
ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ

ಪ್ರತಿಯನ್ನು :-

1. ರಾಜ್ಯದ ಎಲ್ಲಾ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರುಗಳಿಗೆ
2. ರಾಜ್ಯದ ಎಲ್ಲಾ ಮಹಾನಗರಪಾಲಿಕೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು, ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳಿಗೆ.